APRIL 29, 2026
ALL INDIA RADIO- DHARWAD
PRADESH SAMACHARA (KANNADA) 7:05 AM

ಮುಖ್ಯಾಂಶಗಳು

- ಬೇಸಿಗೆ ಹಿನ್ನೆಲೆ: ರಾಜ್ಯದ ವಿವಿಧೆಡೆ ಸಮರ್ಪಕ ಕುಡಿಯುವ ನೀರು ಪೂರೈಕೆ ನಿಟ್ಟಿನಲ್ಲಿ ಜಿಲ್ಲಾಡಳಿತಗಳಿಂದ ಅಗತ್ಯ ಮುನ್ನೆಚ್ಚರಿಕಾ ಕ್ರಮ.

- ಉಡುಪಿಯಲ್ಲಿ ಭಾರತೀಯ ರತ್ನಗಳು ಮತ್ತು ಆಭರಣಗಳ ಸಂಸ್ಥೆಯ ನೂತನ ಕಚೇರಿ ಉದ್ಘಾಟಿಸಿದ ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್.

- ಪ್ರಸ್ತುತ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳ ಪೈಕಿ ಮೊದಲ ಹಂತದಲ್ಲಿ ಸುಮಾರು 8,000 ಹುದ್ದೆಗಳ ಭರ್ತಿಗೆ ಶೀಘ್ರ ಚಾಲನೆ–ಗೃಹ ಸಚಿವರ ಹೇಳಿಕೆ.

- ಬಿರುಗಾಳಿ–ಮಳೆ ಹಾನಿ ಪ್ರದೇಶಗಳಿಗೆ ಶಿವಮೊಗ್ಗ ಜಿಲ್ಲಾ ಉಸ್ತುವಾರಿ ಸಚಿವರ ಭೇಟಿ: ತ್ವರಿತ ಪರಿಹಾರಕ್ಕೆ ಸೂಚನೆ

ಈಗ ವಾರ್ತೆಗಳ ವಿವರ

*******

ಬೇಸಿಗೆ ಹಿನ್ನೆಲೆಯಲ್ಲಿ ರಾಜ್ಯದ ಹಲವೆಡೆ ಜನ, ಜಾನುವಾರುಗಳಿಗೆ ಕುಡಿಯುವ ನೀರಿನ ಕೊರತೆಯಾಗುತ್ತಿದ್ದು, ಸಮರ್ಪಕ ನೀರು ಪೂರೈಕೆ ನಿಟ್ಟಿನಲ್ಲಿ ವಿವಿಧ ಜಿಲ್ಲಾಡಳಿತಗಳು ಅಗತ್ಯ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಂಡಿವೆ. ಬೇಸಿಗೆ ಹಿನ್ನೆಲೆಯಲ್ಲಿ ಮಂಡ್ಯ ಜಿಲ್ಲೆಯ ಗ್ರಾಮಾಂತರ ಪ್ರದೇಶಗಳ ಸಾರ್ವಜನಿಕರಿಗೆ ಕುಡಿಯುವ ನೀರು ಸರಬರಾಜಿನಲ್ಲಿ ಯಾವುದೇ ತೊಂದರೆ ಉಂಟಾಗದಂತೆ ಅಗತ್ಯ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಲು ಸಂಬಂಧಿಸಿದ ಅಧಿಕಾರಿಗಳಿಗೆ ಜಿಲ್ಲಾ ಪಂಚಾಯ್ತಿ ಕಾರ್ಯ ನಿರ್ವಾಹಕ ಅಧಿಕಾರಿ ನಂದಿನಿ ಸೂಚಿಸಿದ್ದಾರೆ. ಜಿಲ್ಲೆಯ ಗ್ರಾಮಾಂತರ ಪ್ರದೇಶಗಳಲ್ಲಿ ಒಟ್ಟು 289 ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗಬಹುದೆಂದು ಅಂದಾಜಿಸಲಾಗಿದ್ದು, ಈಗಾಗಲೇ 13 ಗ್ರಾಮಗಳಲ್ಲಿ ಖಾಸಗಿ ಕೊಳವೆಬಾವಿಗಳ ಮೂಲಕ ಪರ್ಯಾಯವಾಗಿ ಕುಡಿಯುವ ನೀರು ಸರಬರಾಜು ಮಾಡುವ ವ್ಯವಸ್ಥೆ ಕಲ್ಪಿಸಲಾಗಿದೆ ಎಂದು ಮಾಹಿತಿ ನೀಡಿದ್ದಾರೆ. ಕುಡಿಯುವ ನೀರನ್ನು ತೋಟಗಾರಿಕೆ, ಕಟ್ಟಡ ನಿರ್ಮಾಣ ಮತ್ತು ವಾಹನ ತೊಳೆಯಲು ಬಳಸುವುದನ್ನು ಕಟ್ಟುನಿಟ್ಟಾಗಿ ನಿ ೀಧಿಸಲಾಗಿದೆ.

ಸಾರ್ವಜನಿಕರು ನೀರನ್ನು ಮಿತವಾಗಿ ಬಳಕೆ ಮಾಡಬೇಕು ಎಂದು ಕೋಲಾರ ಜಿಲ್ಲಾಧಿಕಾರಿ ಡಾ.ಎಂ.ಆರ್.ರವಿ ಸೂಚಿಸಿದ್ದಾರೆ. ಜಿಲ್ಲಾ ವಿಪತ್ತು ನಿರ್ವಹಣಾ ಸಭೆಯಲ್ಲಿ ಮಾತನಾಡಿದ ಅವರು, ಪಂಪ್ ಅಥವಾ ಮೋಟಾರ್ ಕೆಟ್ಟರೆ 24 ಗಂಟೆಗಳೊಳಗೆ ಮತ್ತು ಪೈಪ್ ಲೈನ್ ಒಡೆದರೆ ಕೂಡಲೇ ಸರಿಪಡಿಸಬೇಕು. ಸ್ಥಳದಲ್ಲೇ ಕೆಲಸದ ಆದೇಶ ನೀಡಲು ನಿರ್ದೇಶನ ನೀಡಿದ್ದಾರೆ. ಧಾರವಾಡ ಜಿಲ್ಲೆಯಲ್ಲಿ ಸುಮಾರು 18 ರಿಂದ 19 ಹಳ್ಳಿಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಆಗಲಿದೆ. ಸಮಸ್ಯೆ ತಲೆದೋರಿರುವ ಗ್ರಾಮಗಳಲ್ಲಿ ಖಾಸಗಿ ಕೊಳವೆ ಬಾವಿಗಳ ಮೂಲಕ ನೀರು ಸರಬರಾಜು ಮಾಡಲಾಗುತ್ತಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಸಂತೋ ’ ಲಾಡ್ ಹೇಳಿದ್ದಾರೆ. ಈಗಾಗಲೇ ಕುಡಿಯುವ ನೀರಿನ ಸಮಸ್ಯೆ ಆಗದಂತೆ ಕ್ರಮ ವಹಿಸಲು ಅಧಿಕಾರಿಗಳಿಗೆ ಸೂಚಿಸಲಾಗಿದೆ. ಅಕಾಲಿಕ ಮಳೆ ಆಗಿರುವ ಕುರಿತು ಸರ್ಕಾರಕ್ಕೆ ಮಾಹಿತಿ ಒದಗಿಸಲಾಗಿದೆ. ಮಳೆಯಿಂದ ಹಾನಿಯಾದವರಿಗೆ ಸೂಕ್ತ ಪರಿಹಾರ ನೀಡುವಂತೆ ಸರ್ಕಾರಕ್ಕೆ ಮನವಿ ಮಾಡಲಾಗಿದೆ ಎಂದು ತಿಳಿಸಿದ್ದಾರೆ.

*******

ಗ್ರಾಮೀಣ ಯುವಕರಿಗೆ ಕಡಿಮೆ ದರದಲ್ಲಿ ತರಬೇತಿ ನೀಡಿ ಉದ್ಯೋಗಾವಕಾಶಗಳನ್ನು ಕಲ್ಪಿಸಲು ಕೇಂದ್ರ ಸರ್ಕಾರ ನಿರಂತರವಾಗಿ ಶ್ರಮಿಸುತ್ತಿದೆ ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದ್ದಾರೆ. ಉಡುಪಿಯಲ್ಲಿ ಭಾರತೀಯ ರತ್ನಗಳ ಮತ್ತು ಆಭರಣಗಳ ಸಂಸ್ಥೆಯ ನೂತನ ಉದ್ಘಾಟಿಸಿ, ಮಾತನಾಡಿದ ಅವರು, ದೇಶದ ಯುವಕರಿಗೆ ಹೊಸ ಉದ್ಯೋಗಾವಕಾಶಗಳನ್ನು ಕಲ್ಪಿಸುವ ನಿಟ್ಟಿನಲ್ಲಿ ಈ ಸಂಸ್ಥೆ ಕೆಲಸ ಮಾಡುತ್ತಿದೆ. ವಿಶೇ ’ವಾಗಿ ಈ ಭಾಗದ ಯುವಕರಿಗೆ ಕಡಿಮೆ ವೆಚ್ಚದಲ್ಲಿ ಗುಣಮಟ್ಟದ ತರಬೇತಿ ನೀಡುವ ವ್ಯವಸ್ಥೆ ಮಾಡಲಾಗಿದೆ ಎಂದರು. ಜೆಮ್ಸ್ ಅಂಡ್ ಜ್ಯುವೆಲ್ಸ್ ತರಬೇತಿ ಕೇಂದ್ರಗಳ ಪೈಕಿ ಉಡುಪಿ ನಾಲ್ಕನೇ ಸ್ಥಾನದಲ್ಲಿದ್ದು, ಗ್ರಾಮೀಣ ಯುವಕರಿಗೂ ಕಡಿಮೆ ದರದಲ್ಲಿ ತರಬೇತಿ ನೀಡಿ ಉದ್ಯೋಗಾವಕಾಶಗಳನ್ನು ಕಲ್ಪಿಸಲಾಗುತ್ತದೆ ಎಂದು ಸಚಿವರು ಹೇಳಿದರು.

*******

ಪ್ರಸ್ತುತ ಇಲಾಖೆಯಲ್ಲಿ ಸುಮಾರು 15 ರಿಂದ 16,000 ಹುದ್ದೆಗಳು ಖಾಲಿ ಇದ್ದು, ಮೊದಲ ಹಂತದಲ್ಲಿ ಸುಮಾರು 8,000 ಹುದ್ದೆಗಳ ಭರ್ತಿಗೆ ಮುಂದಿನ 10 ದಿನಗಳಲ್ಲಿ ಅಧಿಕೃತ ಅಧಿಸೂಚನೆ ಹೊರಡಿಸಲಾಗುವುದು ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ ಹೇಳಿದ್ದಾರೆ. ಕಲಬುರಗಿ ಹೊರವಲಯದ ನಾಗನಹಳ್ಳಿ ಪೊಲೀಸ್ ತರಬೇತಿ ಮಹಾವಿದ್ಯಾಲಯದಲ್ಲಿ ನಡೆದ ಪ್ರಶಿಕ್ಷಣಾರ್ಥಿಗಳ ನಿರ್ಗಮನ ಪಥಸಂಚಲನ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಪರಿಶಿ ್ಟ ಜಾತಿಯಲ್ಲಿನ ಒಳ ಮೀಸಲಾತಿ ನ್ಯಾಯಯುತವಾಗಿ ಹಂಚಿಕೆಯಾಗಿದ್ದರಿಂದ ಇನ್ನು ಮುಂದೆ ಪೊಲೀಸ್ ನೇಮಕಾತಿ ಮಂಡಳಿ ನೇಮಕಾತಿ ಪ್ರಕ್ರಿಯೆ ನಡೆಸಲಿದೆ ಎಂದರು. ಆಧುನಿಕ ತಂತ್ರಜ್ಞಾನದ ಪ್ರಸ್ತುತ ಸಂದರ್ಭದಲ್ಲಿ ವಂಚನೆ ಪ್ರಕರಣಗಳು ಹೊಸ ರೂಪ ಪಡೆದುಕೊಂಡಿದ್ದು, ಅದಕ್ಕೆ ತಕ್ಕಂತೆ ಡ್ರೋನ್, ಸಿ.ಸಿ.ಟಿ.ವಿ., ಬಾಡಿ ಕ್ಯಾಮೆರಾಗಳನ್ನು ಪೊಲೀಸರಿಗೆ ಒದಗಿಸಲಾಗಿದೆ. ಡಿಜಿಟಲ್ ಅರೆಸ್ಟ್, ಸೈಬರ್ ವಂಚನೆ ಹೆಚ್ಚುತ್ತಿದ್ದು, ಇದಕ್ಕಾಗಿ ಪ್ರತ್ಯೇಕ ನೀತಿ ಜಾರಿಗೆ ತರಲಾಗಿದೆ ಎಂದು ಸಚಿವರು ಹೇಳಿದರು.

*******

ಬಿರುಗಾಳಿ ಮತ್ತು ಮಳೆಯಿಂದ ಹಾನಿಗೊಳಗಾದ ಅಡಿಕೆ, ತೆಂಗು ತೋಟ ಸೇರಿದಂತೆ ಬೆಳೆ ಹಾನಿಯಾದ ರೈತರಿಗೆ ಮತ್ತು ಮನೆ ಕಳೆದುಕೊಂಡವರಿಗೆ ತಕ್ಷಣವೇ ಸೂಕ್ತ ಪರಿಹಾರ ಬಿಡುಗಡೆ ಮಾಡುವಂತೆ ಶಿವಮೊಗ್ಗ ಜಿಲ್ಲಾ ಉಸ್ತುವಾರಿ ಸಚಿವ ಮಧು ಬಂಗಾರಪ್ಪ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಗಾಳಿ ಮಳೆಯಿಂದ ಹಾನಿಗೊಳಗಾದ ಶಿವಮೊಗ್ಗ ಗ್ರಾಮಾಂತರ ಪ್ರದೇಶಗಳಿಗೆ ನಿನ್ನೆ ಭೇಟಿ ನೀಡಿ, ಸಂತ್ರಸ್ತ ರೈತರು ಮತ್ತು ಸಾರ್ವಜನಿಕರೊಂದಿಗೆ ಮಾತನಾಡಿ ಅಹವಾಲು ಸ್ವೀಕರಿಸಿದರು. ಸಂಭವಿಸಿರುವ ನ ್ಟದ ಕುರಿತು ಸಮಗ್ರ ವರದಿ ನೀಡುವಂತೆ ಕಂದಾಯ ಇಲಾಖೆ, ಗ್ರಾಮ ಪಂಚಾಯ್ತಿ, ವಿಪತ್ತು ನಿರ್ವಹಣೆ ಇಲಾಖೆ ಸೇರಿದಂತೆ ಸಂಬಂಧಿಸಿದ ಇಲಾಖೆ ಅಧಿಕಾರಿಗಳು ಸಮನ್ವಯತೆಯಿಂದ ಕಾರ್ಯ ನಿರ್ವಹಿಸಿ ಪರಿಹಾರ ದೊರಕಿಸುವಂತೆ ಸೂಚಿಸಲಾಗಿದೆ. ಈ ಕುರಿತು ಖುದ್ದಾಗಿ ಮುಖ್ಯಮಂತ್ರಿ ಅವರೊಂದಿಗೆ ಚರ್ಚಿಸಲಾಗುವುದು ಎಂದು ಸಚಿವ ಮಧು ಬಂಗಾರಪ್ಪ ಹೇಳಿದರು.

*******

ಕಾಡಾನೆ–ಮಾನವ ಸಂಘ ್ಕಕ್ಕೆ ಕಡಿವಾಣ ಹಾಕುವ ನಿಟ್ಟಿನಲ್ಲಿ ಅರಣ್ಯ ಇಲಾಖೆ ಹೆಚ್ಚಿನ ಮುತುವರ್ಜಿ ವಹಿಸಿ ಕೆಲಸ ಮಾಡಬೇಕು ಎಂದು ಹಾಸನ ಜಿಲ್ಲಾ ಉಸ್ತುವಾರಿ ಸಚಿವ ಕೃ ್ಣಭೈರೇಗೌಡ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಕಾಡಾನೆ ದಾಳಿಯಿಂದ ಹಾಸನ ಜಿಲ್ಲೆಯಲ್ಲಿ ಸಾವಿನ ಪ್ರಮಾಣ ಹೆಚ್ಚಾಗುತ್ತಿರುವ ಬೆನ್ನಲ್ಲೇ ಅಧಿಕಾರಿಗಳೊಂದಿಗೆ ಮಹತ್ವದ ಸಭೆ ನಡೆಸಿದ ಅವರು, ಆನೆ ದಾಳಿ ಮಾಡಬಹುದಾದ ಅಪಾಯವಿರುವ ಗ್ರಾಮಗಳಲ್ಲಿ ಗ್ರಾಮ ಪಂಚಾಯಿತಿ ಅಧಿಕಾರಿಗಳು, ಗ್ರಾಮ ಸಹಾಯಕರು, ಆಶಾ ಕಾರ್ಯಕರ್ತರು ಹಾಗೂ ಪೊಲೀಸರು ಸೇರಿದಂತೆ ಅಗತ್ಯವಿರುವ ಎಲ್ಲಾ ಇಲಾಖೆಯ ಅಧಿಕಾರಿಗಳ ಟಾಸ್ಕ್ ಫೋರ್ಸ್ ರಚಿಸಿ ಜನರಿಗೆ ಎಚ್ಚರಿಕೆ ನೀಡಲು ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು.

*******

ಈಗ ಪ್ರಕಟಣೆ ನಂತರ ಪ್ರದೇಶ ಸಮಾಚಾರ ಮುಂದುವರಿಯುವುದು..

ಪ್ರಕಟಣೆ–37 ಸೆಕೆಂಡ್ಸ್

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ

*******

ಕೊಡಗು ಜಿಲ್ಲೆಯಲ್ಲಿ ಬ್ಯಾರಿ ಸಮುದಾಯ ಭವನ ನಿರ್ಮಾಣಕ್ಕೆ ಒಂದು ಕೋಟಿ ರೂಪಾಯಿ ಒದಗಿಸಲಾಗುವುದು ಎಂದು ವಿಧಾನಸಭಾಧ್ಯಕ್ಷ ಯು.ಟಿ.ಖಾದರ್ ಅವರು ತಿಳಿಸಿದ್ದಾರೆ. ಕರ್ನಾಟಕ ಬ್ಯಾರಿ ಸಾಹಿತ್ಯ ಅಕಾಡೆಮಿ ವತಿಯಿಂದ ಮಡಿಕೇರಿಯಲ್ಲಿ ನಡೆದ ಕೊಡಗು ಜಿಲ್ಲಾ ಬ್ಯಾರಿ ಪ್ರಥಮ ಸಾಹಿತ್ಯ ಸಮ್ಮೇಳನಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಬ್ಯಾರಿ ಸಂಸ್ಕೃತಿ, ಸಾಹಿತ್ಯ, ಪರಂಪರೆಗೆ ತನ್ನದೇ ಇತಿಹಾಸ ಇದ್ದು, ಬ್ಯಾರಿ ಸಂಸ್ಕೃತಿ, ಸಾಹಿತ್ಯ, ಪರಂಪರೆ ಉಳಿಸಿ ಬೆಳೆಸಲು ಶ್ರಮಿಸಬೇಕಿದೆ ಎಂದರು. ಬ್ಯಾರಿ ಸಾಹಿತ್ಯ ಸಮ್ಮೇಳನದಿಂದ ಬ್ಯಾರಿ ಭಾ ೆ ಬೆಳವಣಿಗೆ ಜೊತೆಗೆ ಚಿಂತನ ಮಂಥನಗಳು ನಡೆಯಲಿದ್ದು, ಸಮಾಜ ಅಭಿವೃದ್ಧಿಯತ್ತ ಮುನ್ನಡೆಯಬೇಕು ಎಂದು ಅವರು ಸಲಹೆ ನೀಡಿದರು.

*******

ಜಾನುವಾರುಗಳ ಕಾಲು ಬಾಯಿ ರೋಗದ ವಿರುದ್ಧ, ರಾಷ್ಟ್ರೀಯ ಲಸಿಕಾ ಮಾಸಿಕ ಅಭಿಯಾನ, ಮೇ 22 ರ ವರೆಗೆ ರಾಜ್ಯಾದ್ಯಂತ ನಡೆಯಲಿದ್ದು, ಅಭಿಯಾನದ 9ನೇ ಸುತ್ತಿನಡಿ ಲಸಿಕಾ ಪ್ರಕ್ರಿಯೆಯನ್ನು ಸಂಪೂರ್ಣ ಡಿಜಿಟಲಿಕರಿಸಿ, ಜಿ.ಪಿ.ಎಸ್ ಆಧಾರಿತ, 'ಪಶು ಧನ್ ಆಪ್' ನಲ್ಲಿ ದಾಖಲಿಸಲಾಗುತ್ತಿದೆ. ಆಕಾಶವಾಣಿಯೊಂದಿಗೆ ಮಾತನಾಡಿದ ಪ್ರದೇಶ ಸಮಾಚಾರದೊಂದಿಗೆ ಮಾತನಾಡಿದ ಜಿಲ್ಲಾ ಪಶುಪಾಲನಾ ಇಲಾಖೆ ಉಪ ನಿರ್ದೇಶಕ, ಡಾಕ್ಟರ್ ರಾಜು ದೇಶಮುಖ, ಯಾದಗಿರಿ ಜಿಲ್ಲೆಯಲ್ಲಿ, ಕಳೆದ ಐದು ದಿನಗಳಲ್ಲಿ, 12 ಸಾವಿರಕ್ಕೂ ಹೆಚ್ಚು ಜಾನುವಾರುಗಳಿಗೆ, ಕಾಲು ಬಾಯಿ ಲಸಿಕೆ ನೀಡಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

ಧ್ವನಿ–ಡಾ.ರಾಜು ದೇಶಮುಖ–36 ಸೆಕೆಂಡ್ಸ್

*******

ರಾಷ್ಟ್ರೀಯ ಜಾನುವಾರು ರೋಗ ನಿಯಂತ್ರಣ ಕಾರ್ಯಕ್ರಮದಡಿ, 9 ನೇ ಸುತ್ತಿನ ಕಾಲುಬಾಯಿ ರೋಗ ಲಸಿಕಾ ಅಭಿಯಾನಕ್ಕೆ ದಾವಣಗೆರೆಯಲ್ಲಿ ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್ ನಿನ್ನೆ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ರೈತರಿಗೆ ಆರ್ಥಿಕ ಸಂಕ ್ಟಗಳನ್ನು ತಂದೊಡ್ಡುವ, ಕಾಲುಬಾಯಿ ರೋಗವನ್ನು ನಿಯಂತ್ರಿಸಿ ನಿರ್ಮೂಲನೆ ಮಾಡಲು ಪ್ರತಿ 6 ತಿಂಗಳಿಗೊಮ್ಮೆ ರೋಗದ ವಿರುದ್ಧ ಲಸಿಕೆ ಹಾಕಿಸಬೇಕು ಎಂದು ಸಲಹೆ ನೀಡಿದರು.

*******

ಈಗ ಸಂಕ್ಷಿಪ್ತ ಸುದ್ದಿಗಳು

ರಾಮನಗರ ಜಿಲ್ಲೆಯ ಮಾಗಡಿ ತಾಲ್ಲೂಕಿನ ಮೇಲನಹಳ್ಳಿ ಗ್ರಾಮದಲ್ಲಿ ಬ್ಯಾಂಕ್ ಆಫ್ ಬರೋಡ ತನ್ನ ಕಾರ್ಪೊರೇಟ್ ಸಾಮಾಜಿಕ ಹೊಣೆಗಾರಿಕೆ–ಸಿಎಸ್‌ಆರ್ ಅಡಿ ನಿರ್ಮಿಸಿರುವ ಶುದ್ಧ ಕುಡಿಯುವ ನೀರಿನ ಘಟಕವನ್ನು ಸಂಸದ ಡಾ.ಸಿ.ಎನ್.ಮಂಜುನಾಥ ನಿನ್ನೆ ಉದ್ಘಾಟಿಸಿದರು.

ಕರ್ನಾಟಕ ಲಲಿತಕಲಾ ಅಕಾಡೆಮಿ, 2023–24, 2024–25 ಹಾಗೂ 2025–26ನೇ ಸಾಲಿನ ವಿವಿಧ ಪ್ರಶಸ್ತಿಗಳಿಗೆ 36 ಕಲಾವಿದರನ್ನು ಆಯ್ಕೆ ಮಾಡಿದೆ ಎಂದು ಅಕಾಡೆಮಿ ಅಧ್ಯಕ್ಷ ಪ.ಸ. ಕುಮಾರ್ ತಿಳಿಸಿದ್ದಾರೆ.

*******

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು

- ಬೇಸಿಗೆ ಹಿನ್ನೆಲೆ: ರಾಜ್ಯದ ವಿವಿಧೆಡೆ ಸಮರ್ಪಕ ಕುಡಿಯುವ ನೀರು ಪೂರೈಕೆ ನಿಟ್ಟಿನಲ್ಲಿ ಜಿಲ್ಲಾಡಳಿತಗಳಿಂದ ಅಗತ್ಯ ಮುನ್ನೆಚ್ಚರಿಕಾ ಕ್ರಮ.

- ಉಡುಪಿಯಲ್ಲಿ ಭಾರತೀಯ ರತ್ನಗಳು ಮತ್ತು ಆಭರಣಗಳ ಸಂಸ್ಥೆಯ ನೂತನ ಕಚೇರಿ ಉದ್ಘಾಟಿಸಿದ ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್.

- ಪ್ರಸ್ತುತ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳ ಪೈಕಿ ಮೊದಲ ಹಂತದಲ್ಲಿ ಸುಮಾರು 8,000 ಹುದ್ದೆಗಳ ಭರ್ತಿಗೆ ಶೀಘ್ರ ಚಾಲನೆ– ಗೃಹ ಸಚಿವರ ಹೇಳಿಕೆ.

- ಬಿರುಗಾಳಿ–ಮಳೆ ಹಾನಿ ಪ್ರದೇಶಗಳಿಗೆ ಶಿವಮೊಗ್ಗ ಜಿಲ್ಲಾ ಉಸ್ತುವಾರಿ ಸಚಿವರ ಭೇಟಿ: ತ್ವರಿತ ಪರಿಹಾರ ಕ್ರಮಕ್ಕೆ ಸೂಚನೆ.

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಿಗ್ಗೆ 7 ಗಂಟೆ 35 ನಿಮಿಷಕ್ಕೆ

********